


# ರೂರಲ್ ಮಿರರ್.ಕಾಂ

# ಕರಾವಳಿ ಜಿಲ್ಲೆಗಳಲ್ಲಿ ಭಾರೀ ಮಳೆ



ರಾಜ್ಯದ ಕರಾವಳಿ ಮತ್ತು ಮಲೆನಾಡು ಜಿಲ್ಲೆಗಳಲ್ಲಿ ವ್ಯಾಪಕವಾಗಿಯಾಗುವ ಮಳೆ ಸಾಧ್ಯತೆ ಇದ್ದು, ಅಲ್ಲಲ್ಲಿ ಭಾರಿ ಮಳೆ ಸಾಧ್ಯತೆ ಇದೆ. ಒಳನಾಡು ಜಿಲ್ಲೆಗಳಲ್ಲಿ ಜುಲೈ 26 ರವರೆಗೆ ಸಾಧಾರಣ ಮಳೆಯಾಗುವ ಸಾಧ್ಯತೆ ಇದ್ದು ನಂತರ ಮಳೆ ಕಡಿಮೆಯಾಗುವ ಸಾಧ್ಯತೆ ಇದೆ. ಆದರೆ ಕರಾವಳಿ ಭಾಗದಲ್ಲಿ ಜುಲೈ 27 ರವರೆಗೆ ಗಾಳಿ ಸಹಿತ ಮಳೆಯಾಗುವ ಸಾಧ್ಯತೆ ಇದೆ. ಅರಬ್ಬಿ ಸಮುದ್ರದಲ್ಲಿ ಹೆಚ್ಚಿನ ಗಾಳಿ ಬೀಸುವ ಸಾಧ್ಯತೆ ಇದ್ದು, ಸಮುದ್ರದಲ್ಲಿ ಅಲೆಗಳ ಅಬ್ಬರ ಹೆಚ್ಚಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮತ್ತು ಬೆಂಗಳೂರಿನ ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ಎಚ್ಚರಿಕೆ ನೀಡಿದೆ.

ರಾಜ್ಯದ ಉತ್ತರಕನ್ನಡ , ಉಡುಪಿ ಜಿಲ್ಲೆಗಳಲ್ಲಿ ಇಂದು ಭಾರೀ ಮಳೆಯಾಗುವ ಸಾಧ್ಯತೆ ಇದ್ದು ರೆಡ್ ಎಲರ್ಟ್ ನೀಡಲಾಗಿದೆ. ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಲ್ಲಿ ಉತ್ತಮ ಮಳೆಯಾಗುವ ಸಾಧ್ಯತೆ ಇದ್ದು ಆರೆಂಜ್ ಎಲರ್ಟ್ ನೀಡಲಾಗಿದೆ.

ಕರಾವಳಿ ಜಿಲ್ಲೆಗಳಲ್ಲಿ ಜನರು ನದಿಗಳು, ನೀರಿರುವ ಪ್ರದೇಶ ಮತ್ತು ಸಮುದ್ರದಿಂದ ದೂರವಿರುವಂತೆ ಅಧಿಕಾರಿಗಳು ಸೂಚಿಸಿದ್ದಾರೆ. ಸಾರ್ವಜನಿಕರು, ವಿಶೇಷವಾಗಿ ಮಕ್ಕಳು ಮತ್ತು ಕಾರ್ಮಿಕರು ಮಳೆ, ಗಾಳಿ ಅಥವಾ ಸಿಡಿಲು ಇರುವಾಗ ಹೊರಗೆ ಹೋಗಬಾರದು ಮತ್ತು ಸುರಕ್ಷಿತ ಕಟ್ಟಡಗಳಲ್ಲಿ ಆಶ್ರಯ ಪಡೆಯಬೇಕು. ಕೃಷಿಕರು ಮಳೆ ಅಥವಾ ಸಿಡಿಲಿನಂತಹ ಸಂದರ್ಭದಲ್ಲಿ ಹೊರಗಿನ ಕೃಷಿ ಚಟುವಟಿಕೆಗಳಿಂದ ದೂರವಿರಬೇಕು ಎಂದು ಸಲಹೆ ನೀಡಲಾಗಿದೆ. ಅಪಾಯಕಾರಿ ಮರಗಳು ಅಥವಾ ವಿದ್ಯುತ್ ಕಂಬಗಳ ಬಳಿ ನಿಲ್ಲದಂತೆ ಮತ್ತು ಮುರಿದ ವಿದ್ಯುತ್ ತಂತಿಗಳಿಂದ ದೂರವಿರುವಂತೆ ಸಾರ್ವಜನಿಕರಿಗೆ ಎಚ್ಚರಿಕೆ ನೀಡಲಾಗಿದೆ. ಜನರು ದುರ್ಬಲ ಅಥವಾ ಹಳೆಯ ಕಟ್ಟಡಗಳು ಮತ್ತು ಮರಗಳಿಂದ ದೂರವಿರಬೇಕು ಎಂದು ಎಚ್ಚರಿಕೆ ನೀಡಲಾಗಿದೆ.

ಹೆಚ್ಚಿನ ಓದಿಗೆ : www.theruralmirror.com

## ಸೆಪ್ಟೆಂಬರ್ 22 ರಿಂದ ರಾಜ್ಯದಲ್ಲಿ 15 ದಿನಗಳ ಕಾಲ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ



ರಾಜ್ಯದಲ್ಲಿ ಸೆಪ್ಟಂಬರ್ 22 ರಿಂದ ಅಕ್ಟೋಬರ್  7 ರವರೆಗೆ 15 ದಿನಗಳ ಕಾಲ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ನಡೆಯಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕುರಿತಾದ ಪೂರ್ವಭಾವಿ ಸಭೆಯಲ್ಲಿ ಅಕ್ಟೋಬರ್ ಕೊನೆಯ ಒಳಗಾಗಿ ಸಮೀಕ್ಷೆ ವರದಿಯನ್ನು ಸಲ್ಲಿಸಬೇಕು ಎಂದು ಸೂಚಿಸಿದ್ದಾರೆ. ರಾಜ್ಯದ ಎಲ್ಲಾ 7 ಕೋಟಿ ಜನರ ಸಮೀಕ್ಷೆ ನಡೆಸಲಾಗುವುದು. ಜಾತಿ ತಾರತಮ್ಯ ನಿವಾರಣೆ ಮಾಡುವುದು ಗಣತಿಯ ಮುಖ್ಯ ಉದ್ದೇಶ ಎಂದು ಮುಖ್ಯಮಂತ್ರಿ ಹೇಳಿದ್ದಾರೆ. ರಾಜ್ಯದ ಪ್ರತಿಯೊಬ್ಬರ ಆರ್ಥಿಕ ಪರಿಸ್ಥಿತಿ, ಜಮೀನು ಇದೆಯೇ ಇಲ್ಲವೇ ಸೇರಿದಂತೆ ಸಮಗ್ರ ಸಮೀಕ್ಷೆ ನಡೆಯಬೇಕು. ಈ ಸಮೀಕ್ಷೆ ವರದಿ ಮುಂದಿನ ಬಜೆಟ್ ಸಿದ್ಧಪಡಿಸುವ ಸಂದರ್ಭದಲ್ಲಿ ಆಧಾರವಾಗಲಿದೆ. ಈ ಬಾರಿಯ ಸಮೀಕ್ಷೆ ದೇಶದಲ್ಲೇ ಮಾದರಿ ಸಮೀಕ್ಷೆಯಾಗಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಸಮೀಕ್ಷೆ ಕಾರ್ಯದ ಮೇಲುಸ್ತುವಾರಿಗೆ ಉನ್ನತಮಟ್ಟದ ಸಮಿತಿ ರಚಿಸಲು ತಿರ್ಮಾನ ಕೈಗೊಳ್ಳಲಾಗಿದೆ.






ರೂರಲ್ ಮಿರರ್.ಕಾಂ

# ರಾಸಾಯನಿಕ ರಹಿತ ದಂತಮಂಜನ 'ದಂತಸುರಭಿ'

ಭಾರತೀಯ ಸಂಸ್ಕೃತಿಯಲ್ಲಿ ಸಂಸ್ಕಾರ- ಸಂಸ್ಕೃತಿಗೆ ಮಹತ್ವದ ಸ್ಥಾನವಿದೆ. ಸಂಸ್ಕೃತಿ- ಸಂಸ್ಕಾರ ಬಿಟ್ಟರೆ ಮುಂದಿನ ಪೀಳಿಗೆ ರಾಕ್ಷಸಕುಲವಾಗಿ ಬೆಳೆಯಬಹುದು ಎಂದು ಶ್ರೀಮಜ್ಜಗದ್ಗುರು ಶಂಕರಾಚಾರ್ಯ ಶ್ರೀ ರಾಘವೇಶ್ವರಭಾರತೀ ಮಹಾಸ್ವಾಮೀಜಿ ನುಡಿದರು.

ಅಶೋಕೆಯಲ್ಲಿ ಚಾತುರ್ಮಾಸ್ಯ ವ್ರತಾಚರಣೆಯಲ್ಲಿರುವ ಶ್ರೀಗಳು ಬುಧವಾರ ಶ್ರೀರಾಮಚಂದ್ರಾಪುರ ಮಠದ ಅಧೀನದ ಗೋಫಲ ಟ್ರಸ್ಟ್ ಹೊಸದಾಗಿ ಅಭಿವೃದ್ಧಿಪಡಿಸಿರುವ ರಾಸಾಯನಿಕ ರಹಿತ ದಂತಮಂಜನ 'ದಂತಸುರಭಿ' ಲೋಕಾರ್ಪಣೆ ಮಾಡಿ ಆಶೀರ್ವಚನ ಅನುಗ್ರಹಿಸಿದರು.

ಮಂಗಲ ದ್ರವ್ಯಗಳ ದರ್ಶನ, ಬಳಕೆಯಿಂದ ನಮ್ಮ ದಿನ ಆರಂಭವಾಗಬೇಕು ಎಂದು ಶಾಸ್ತ್ರ ಹೇಳುತ್ತದೆ. ಆದರೆ ಬೆಳಿಗ್ಗೆ ಎದ್ದ ತಕ್ಷಣ ವಿಷದೊಂದಿಗೇ ದಿನ ಆರಂಭಿಸುವ ಪದ್ಧತಿ ಬೆಳೆದಿದೆ. ದಂತಮಂಜನ ಹೆಸರಿನಲ್ಲಿ ವಿಷ, ಎಲುಬಿನ ಪುಡಿಯನ್ನು ಬಾಯಿಗೆ ಹಾಕಿಕೊಳ್ಳುತ್ತೇವೆ. ಆದರೆ ಗೋಫಲ ಟ್ರಸ್ಟ್‌ನ ವ್ಯಾಪಕ ಚಿಂತನೆ, ಸಾಮಾಜಿಕ ಹೊಣೆಗಾರಿಕೆಯ ಫಲವಾಗಿ ವಿಶ್ವಕ್ಕೆ ವಿಷಮುಕ್ತ, ರಾಸಾಯನಿಕ ರಹಿತ ದಂತಮಂಜನ ಲಭ್ಯವಾಗುತ್ತಿದೆ ಎಂದು ಬಣ್ಣಿಸಿದರು.

ಮಂಗಲದ್ರವ್ಯಗಳನ್ನೇ ಬಳಸಿಕೊಂಡು ಅಭಿವೃದ್ಧಿಪಡಿಸಿರುವ ದಂತಸುರಭಿ, ಸಮಾಜವನ್ನು ವಿಷಮುಕ್ತಗೊಳಿಸುವ ನಿಟ್ಟಿನಲ್ಲಿ ದಿಟ್ಟ ಹೆಜ್ಜೆ ಎಂದು ಹೇಳಿದರು. ವಿಶ್ವಕ್ಕೆ, ಭಾರತೀಯರಿಗೆ, ಸನಾತನ ಸಮಾಜಕ್ಕೆ ಇದು ದೊಡ್ಡ ಕೊಡುಗೆ. ಜನರು ತಮ್ಮ ಜೀವನವನ್ನು ಶುಭಕರ ಮಾಡಿಕೊಳ್ಳಲು ಇಂಥ ವಿಷಮುಕ್ತ ಹಾದಿಯಲ್ಲಿ ನಡೆಯಬೇಕು ಎಂದು ಆಶಿಸಿದರು.

ಚಾತುರ್ಮಾಸ್ಯದ ಸಂದರ್ಭದಲ್ಲಿ ಸ್ವರ್ಣಪಾದುಕೆ ಸೇವೆ ಮಾಡಿಸಿದ ಹಾಲಕ್ಕಿ ಸಮಾಜದ ಶ್ರದ್ಧೆ- ನಿಷ್ಠೆಯನ್ನು ಶ್ಲಾಘಿಸಿದ ಶ್ರೀಗಳು, ಗೋಸೇವೆ ಮತ್ತು ಕೃಷಿ ಕ್ಷೇತ್ರದಲ್ಲಿ ಸಾಧನೆ ಮಾಡಿಕೊಂಡು ಬಂದಿರುವ ಹಾಲಕ್ಕಿ




ಸಮುದಾಯ ಅಪರೂಪದ ಹಾಗೂ ಶ್ರೀಮಂತ ಪರಂಪರೆಯನ್ನು ಹೊಂದಿದೆ. ಇದು ಉಳಿಯಬೇಕು ಎಂದು ಸೂಚಿಸಿದರು.

ಹೊಸ ಉತ್ಪನ್ನದ ಬಗ್ಗೆ ವಿವರ ನೀಡಿದ ಗೋಫಲ ಟ್ರಸ್ಟ್ ವ್ಯವಸ್ಥಾಪಕ ನಿರ್ದೇಶಕ ಬಾಲಸುಬ್ರಹ್ಮಣ್ಯ ಅವರು, "ಗೋಮಯ ಭಸ್ಮ ಮತ್ತು ಇತರ ಆಯುರ್ವೇದ ಉತ್ಪನ್ನಗಳನ್ನು ಬಳಸಿ ಬಾಯಿ ಹಾಗೂ ಹಲ್ಲಿನ ರಕ್ಷಣೆಗಾಗಿ ದಂತಸುರಭಿ ಅಭಿವೃದ್ಧಿಪಡಿಸಲಾಗಿದೆ. 21 ಆಯುರ್ವೇದ ವಸ್ತುಗಳನ್ನು ಬಳಸಿ ಇದನ್ನು ಅಭಿವೃದ್ಧಿಪಡಿಸಲಾಗಿದೆ. ದಂತರಕ್ಷಣೆಗೆ ಅನಿವಾರ್ಯ ಎನ್ನಲಾದ ರಾಸಾಯನಿಕಗಳು, ಇತರ ದಂತಮಂಜನಗಳಲ್ಲಿ ಬಳಸುವ ಮರಳಿನ ಪುಡಿ ಅಥವಾ ಎಲುಬಿನ ಪುಡಿಯಿಂದ ಇದು ಮುಕ್ತವಾಗಿದೆ. ಯಾವುದೇ ಮಾರ್ಜಕಗಳನ್ನೂ ಇದರಲ್ಲಿ ಬಳಸಿಲ್ಲ" ಎಂದು ಸ್ಪಷ್ಟಪಡಿಸಿದರು.

ಬೆಂಗಳೂರಿನ ಡಾ.ವಿಶ್ವನಾಥ ಭಟ್ ದಂಪತಿ ಸರ್ವಸೇವೆ ನೆರವೇರಿಸಿದರು. ಗೋಫಲ ಟ್ರಸ್ಟ್ ಅಧ್ಯಕ್ಷ ಪದ್ಮನಾಭ ಭಟ್ ಕೊಂಕೋಡಿ, ಟ್ರಸ್ಟಿಗಳಾದ ಡಾ.ವೈ.ವಿ.ಕೃಷ್ಣಮೂರ್ತಿ, ಮುರಳೀಧರ ಪ್ರಭು, ಕೇಶವ ಪ್ರಸಾದ್ ಮುಳಿಯ, ವ್ಯವಸ್ಥಾಪಕ ನಿರ್ದೇಶಕ ಬಾಲಸುಬ್ರಹ್ಮಣ್ಯ, ಗೋವಿಂದ ಹೆಗಡೆ, ಶಶಿಶೇಖರ ಧರ್ಬೆ, ಕುಮಾರ್, ಪ್ರಕಾಶ ಕುಮಾರ್ ನಲ್ಕ, ಡಾ.ವಿದ್ಯಾ ಸರಸ್ವತಿ ಮೊದಲಾದವರಿದ್ದರು.

## ಮಾವು ಬೆಳೆಗಾರರಿಗೆ ಬೆಲೆ ಕೊರತೆ ಪಾವತಿ - ಕೃಷಿ ಸಚಿವರಿಂದ ಕೃತಜ್ಞತೆ

ಮಾವು ಬೆಳೆಗಾರರಿಗೆ ಬೆಂಬಲವಾಗಿ 2025-26 ರ ಸಾಲಿನಲ್ಲಿ ಮಾರುಕಟ್ಟೆ ಮಧ್ಯಸ್ಥಿಕೆ ಯೋಜನೆಯಡಿಯಲ್ಲಿ ಬೆಲೆ ಕೊರತೆ ಪಾವತಿ ಯೋಜನೆಯನ್ನು ಯಶಸ್ವಿಯಾಗಿ ಜಾರಿಗೊಳಿಸಿದ್ದಕ್ಕಾಗಿ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯಕ್ಕೆ ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಕೃತಜ್ಞತೆ ಸಲ್ಲಿಸಿದ್ದಾರೆ.

ಮಂಡ್ಯದಲ್ಲಿ ಮಾತನಾಡಿದ ಅವರು, ಈ ಯೋಜನೆಯು ರಾಜ್ಯದ ಮಾವು ಬೆಳೆಗಾರರಿಗೆ ಸಕಾಲಿಕ ಮತ್ತು ಅತ್ಯಗತ್ಯವಾದ ನೆರವು ಒದಗಿಸಿದೆ ಎಂದು ಹೇಳಿದ್ದಾರೆ. ಇದೇ ವೇಳೆ ರಾಜ್ಯದಲ್ಲಿ ರಸಗೊಬ್ಬರ ಕೊರತೆ ಇಲ್ಲ ಎಂದು ಸ್ಪಷ್ಟ ಪಡಿಸಿದ್ದಾರೆ.

## ಪಿಎಂ ಇಜಿಪಿ ಯಶಸ್ವಿ ಯೋಜನೆ ಅನುಷ್ಠಾನ ಹಲವು ಮಂದಿಯ ಬದುಕಿಗೆ ಆಸರೆ

ವಿಜಯನಗರ ಜಿಲ್ಲೆಯ ಹೊಸಪೇಟೆಯಲ್ಲಿ ಪ್ರಧಾನ ಮಂತ್ರಿ ಉದ್ಯೋಗ ಸೃಷ್ಟಿ ಯೋಜನೆ-ಪಿಎಂ ಇಜಿಪಿ ಯಶಸ್ವಿಯಾಗಿ ಅನುಷ್ಠಾನಗೊಂಡಿದ್ದು, ಹಲವು ಮಂದಿಯ ಬದುಕಿಗೆ ಆಸರೆಯಾಗಿದೆ. ಲಲಿತಾ ಮತ್ತು ಶ್ರೀಧರ್ ಹವಳೆ ದಂಪತಿ ಕುಟುಂಬದ ಸಹಕಾರದೊಂದಿಗೆ ತಮ್ಮ ಕುಲ ಕಸುಬಾದ ಬಟ್ಟೆ ಹೊಲೆಯುವ ಕೆಲಸ ಮಾಡುತ್ತಲೇ ಹಲವು ಮಂದಿಗೆ ಉದ್ಯೋಗ ನೀಡಿ, ಅವರ ಬದುಕಿಗೂ ನೆರವಾಗಿದ್ದಾರೆ. ಪ್ರಧಾನಮಂತ್ರಿ ಮುದ್ರಾ ಯೋಜನೆಯಿಂದ ಸಾಲ ಸೌಲಭ್ಯ ಪಡೆದ ಹೊಲಿಗೆ



ಉದ್ಯಮವನ್ನು ಆರಂಭಿಸಿ, ಸುಮಾರು 25 ಮಂದಿಗೆ ಉದ್ಯೋಗ ನೀಡಿದ್ದಾರೆ.